# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 18, ರಾಧಾಕೃಷ್ಣ ದೇವಸ್ಥಾನ, ಬೆಂಗಳೂರು-94

ಸಂಖ್ಯೆ: ಸ.ಅ/ವಾ-18/ಪಿ.ಆರ್/08/2022-23 ದಿನಾಂಕ:30-04-2022

## ::ವಾರ್ಡ್ ಸಮಿತಿ ಸಭೆಯ ನಡವಳಿಗಳು::

ವಿಷಯ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 30-04-2022 ರಂದು ವಾರ್ಡ್ ನಂ:18 ರಾಧಾಕೃಷ್ಣ ದೇವಸ್ಥಾನ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಂ.ವೆಂಕಟಾಚಲಪತಿ (ಜಂಟಿ ಆಯುಕ್ತರು ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಸುರೇಂದ್ರಕುಮಾರ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ನಂ. 18 |
| 3. | ಶ್ರೀ. ಮಂಜುನಾಥ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಹೆಬ್ಬಾಳ. |
| 4. | ಶ್ರೀಮತಿ ಮಮತ | ಹಿರಿಯ ಆರೋಗ್ಯ ಪರಿವೀಕ್ಷಕರು. (ವಾರ್ಡ್ ಸಂಖ್ಯೆ.18) |
| 5. | ಶ್ರೀ ಅಕ್ಷಯ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6. | ಶ್ರೀ.ನಾಗರಾಜ್ | ಕಂದಾಯ ವಸೂಲಿಗಾರರು |
| 7. | ಶ್ರೀ. ವಿಜ್ಞಾನಗೌಡ | ಸ್ಥಳಿಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ |
| 8. | ಶ್ರೀ. ಕುಮಾರಸ್ವಾಮಿ | ಆರ್.ಎಂ.ವಿ ಕ್ಲಬ್ ವತಿಯಿಂದ ಭಾಗವಹಿಸಿದವರು |
| 9. | ಶ್ರೀ. ಪ್ರಭು | ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ, ಶ್ರೀ. ಎಂ. ವೆಂಕಟಾಚಲಪತಿ ಮತ್ತು ವಾರ್ಡ್ ಕಾರ್ಯದರ್ಶಿಗಳಾದ ಶ್ರೀ. ಸುರೇಂದ್ರಕುಮಾರ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಬೀದಿ ದೀಪಗಳ ನಿರ್ವಹಣೆ:** ವಿದ್ಯುತ್ ಕಂಬಗಳಲ್ಲಿ ಸ್ವಿಚ್ ಬಾಕ್ಸ್‌ಗಳ ಸುರಕ್ಷತೆ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರಾದ ಶ್ರೀ. ಪ್ರಭು ರವರಿಗೆ ಮತ್ತು ಬೆಸ್ಕಾಂ ಇಂಜಿನಿಯರ್ ರವರಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
2. ಬುಲೆವಾಡ್ ಪಾರ್ಕ್‌ನಲ್ಲಿ ಇರುವ ಇ-ಟಾಯ್ಲೆಟ್ ಅನ್ನು ಬೇರೆ ಜಾಗಕ್ಕೆ ಸ್ಥಳಾಂತರಿಸಲು ಸಭೆಯಲ್ಲಿ ಹಾಜರಿದ್ದ ವಾರ್ಡ್ ಇಂಜಿನಿಯರ್ ಮತ್ತು ಬಿ.ಬಿ.ಎಂ.ಪಿ ತೋಟಗಾರಿಕೆ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
3. 15 ದಿನಗಳ ಒಳಗಾಗಿ ಎಲ್ಲಾ ರಸ್ತೆಗಳ ಬೀದಿ ದೀಪಗಳ ಬಳಿ ಇರುವ ಮರಗಳ ಕೊಂಬೆಗಳನ್ನು ತೆರವುಗೊಳಿಸಲು ಬಿ.ಬಿ.ಎಂ.ಪಿ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮತ್ತು ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರಿಗೆ ಸೂಚಿಸಲಾಯಿತು.
4. ವಾರ್ಡ್‌ನಲ್ಲಿ Gail ಸಂಪರ್ಕಗಳನ್ನು ಪೂರ್ಣಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ Gail ಸಂಸ್ಥೆಯ ಇಂಜಿನಿಯರ್‌ಗಳಿಗೆ ಸೂಚಿಸಲಾಯಿತು, ಕೃಷ್ಣ ಅಪಾರ್ಟ್‌ಮೆಂಟ್ ನಿವಾಸಿಗಳು ಸಂಪರ್ಕ ಪಡೆಯಲು ಕೋರಿದ್ದು, ಶೀಘ್ರವಾಗಿ ಸದರಿ ಅಪಾರ್ಟ್‌ಮೆಂಟ್‌ಗೆ Gail ಸಂಪರ್ಕ ನೀಡಲು ಕ್ರಮ ಕೈಗೊಳ್ಳುವಂತೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಡಾಂಬರೀಕರಣ ಪ್ರಾರಂಭವಾಗಿರುವುದರಿಂದ ಶೀಘ್ರವಾಗಿ ಸಂಪರ್ಕವನ್ನು ನೀಡಿ ಕಾಮಗಾರಿಗಳನ್ನು ಮುಗಿಸಲು ಸೂಚಿಸಲಾಯಿತು.

5. ವಾರ್ಡ್ ವ್ಯಾಪ್ತಿಯಲ್ಲಿ ಶೇಖರಣೆಯಾಗಿರುವ ಕಸವನ್ನು ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 18, ರಾಧಾಕೃಷ್ಣ ದೇವಸ್ಥಾನ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 18, ರಾಧಾಕೃಷ್ಣ ದೇವಸ್ಥಾನ

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಛೇರಿ ಪ್ರತಿ.